
## 9ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಸಮ್ಮೇಳನದಲ್ಲಿ ಬಸವರಾಜ ಹೊರಟ್ಟಿ ಅಭಿಪ್ರಾಯ

# ಅಭಿವೃದ್ಧಿಪರ ಚಿಂತನೆಯಿಂದ ರಾಷ್ಟ್ರದ ಭವಿಷ್ಯ ಉಜ್ವಲ

ರಾಜಸ್ಥಾನ: ದೇಶದ ಪ್ರಗತಿ ಹಾಗೂ ಅಭಿವೃದ್ಧಿಯ ಮುನ್ನೋಟವು ಪ್ರಜಾಪ್ರಭುತ್ವ ಸಂಸ್ಥೆಗಳ ಪರಿಣಾಮಕಾರಿ. ಕಾರ್ಯಚಟುವಟಿಕೆಗಳ ಮೇಲೆ ಅವಲಂಬಿತವಾಗಿದ್ದು, ಜನಪ್ರತಿನಿಧಿಗಳ ಕ್ರಿಯಾಶೀಲತೆ ಹಾಗೂ ಪಕ್ಷಬೇಧವಿಲ್ಲದ ಅಭಿವೃದ್ಧಿಪರ ಚಿಂತನೆಯಿಂದ ಮಾತ್ರ ರಾಷ್ಟ್ರದ ಭವಿಷ್ಯ ಉಜ್ವಲವಾಗಬಲ್ಲದು ಎಂದು ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯ ವ್ಯಕ್ತಪಡಿಸಿದರು.

ರಾಜಸ್ಥಾನದ ಉದಯಪುರದಲ್ಲಿ ನಡೆಯುತ್ತಿರುವ ಮೂರು ದಿನಗಳ 9ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನದಲ್ಲಿ ''ಪ್ರಜಾಪ್ರಭುತ್ವ ಸಂಸ್ಥೆಗಳ ಮೂಲಕ ರಾಷ್ಟ್ರವನ್ನು ಸದೃಢಗೊಳಿಸುವಲ್ಲಿ ಜನಪ್ರತಿನಿಧಿಗಳ ಪಾತ್ರ'' ಎಂಬ ವಿಷಯದ ಕುರಿತು ಅವರು ವಿಚಾರ ಮಂಡಿಸಿದರು.

ನಾಗರಿಕ ಸಮಾಜ ಹೆಚ್ಚು ಪ್ರಜಾಸತ್ತಾತ್ಮಕವಾಗಿರಬೇಕೆನ್ನುವುದು ಪ್ರಜಾಪ್ರಭುತ್ವದ ಮೂಲ ಆಶಯವಾಗಿದ್ದು, ಈ ಆಶಯಕ್ಕೆ ಪೂರಕವಾಗಿ ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ, ಜಾತ್ಯಾತೀತತೆ, ಧಾರ್ಮಿಕ ಸಹಿಷ್ಣುತೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಹಿಂದುಳಿದ ಹಾಗೂ ದಮನಿತ ವರ್ಗಗಳ ಏಳಿಗೆಗಾಗಿ ನಮ್ಮ ಸಂವಿಧಾನದಲ್ಲಿ ಸಂಸದೀಯ ಮೌಲ್ಯಗಳನ್ನು ರೂಪಿಸಲಾಗಿದೆ. ಇದು ಇಂದಿನ ಆಧುನಿಕ ವಿಚಾರವೆನಿಸಿದರೂ ಈ ವೈಜ್ಞಾನಿಕ ಪರಿಕಲ್ಪನೆಯು 12ನೇ ಶತಮಾನದಲ್ಲಿಯೇ ಕರ್ನಾಟಕದಲ್ಲಿ ಬೀಜಾಂಕುರವಾಗಿರುವುದು ಅಭಿಮಾನದ ಸಂಗತಿ. ಜನಸಾಮಾನ್ಯರ ಬದುಕಿಗೆ ಧ್ವನಿಯಾದ ಜಗಜ್ಯೋತಿ ಬಸವೇಶ್ವರರು ಪ್ರತಿಪಾದಿಸಿದ ಆದರ್ಶ ನೈತಿಕ ಮೌಲ್ಯಗಳೇ ಪ್ರಜಾಪ್ರಭುತ್ವದ ಪರಿಕಲ್ಪನೆಗೆ ಅಡಿಪಾಯ ಒದಗಿಸಿವೆ ಎಂದು ಸಭಾಪತಿ ಅವರು ತಿಳಿಸಿದರು.




ಪ್ರಜಾಪ್ರಭುತ್ವದ ಸಾರ್ಥಕತೆಯಲ್ಲಿ ಜನಪ್ರತಿನಿಧಿಗಳ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಜನರ ಸಂಕಷ್ಟ, ಬವಣೆಗಳ ಧ್ವನಿಗೆ ಜನಪ್ರತಿನಿಧಿಗಳು ಕಿವಿಯಾದಾಗ ಮಾತ್ರ ಪ್ರಜಾಪ್ರಭುತ್ವಕ್ಕೆ ನೈಜ ಅರ್ಥ ಬರುತ್ತದೆ. ಜನರ ಮಾನವೀಯ ಅಗತ್ಯತೆಗಳನ್ನು ಕಾನೂನಿನ ಚೌಕಟ್ಟಿಗೆ ತರುವುದೇ ಶಾಸನ ರಚನೆಯಾಗಿದ್ದು, ಈ ಹಂತದಲ್ಲಿ ಕಾರ್ಯಾಂಗ ಮತ್ತು ಶಾಸಕಾಂಗಳೆರಡು ರಥದ ಜೋಡಿ ಗಾಲಿಗಳ ಹಾಗೆ ಚಲಿಸಿದರೆ ಮಾತ್ರ ಪ್ರಜಾಪ್ರಭುತ್ವ ಯಶಸ್ವಿಯಾಗುತ್ತದೆ. ಪ್ರಜಾಪ್ರಭುತ್ವದ ಮುಖ್ಯ ಉದ್ದೇಶಗಳನ್ನು ಅತ್ಯಂತ ದಕ್ಷ ಹಾಗೂ ಪರಿಪೂರ್ಣ ನೆಲೆಗಳಲ್ಲಿ ಈಡೇರಿಸಲು ಇರುವ ಏಕೈಕ ವೇದಿಕೆ ಎಂದರೆ ಉಭಯ ಮಂಡಲದ ಸದನಗಳು ಎಂದು ಬಣ್ಣಿಸಿದರು.

ದೇಶದ ಉನ್ನತಿಯಲ್ಲಿ ಜನಪ್ರತಿನಿಧಿಗಳ ಪಾತ್ರ ಹಾಗೂ ನಡವಳಿಕೆ ಕುರಿತು ತಮ್ಮ ನಾಲ್ಕು ದಶಕಗಳ ಅನುಭವವನ್ನು ಮೆಲುಕು ಹಾಕಿದ ಅವರು, ಜಾತಿ, ಧರ್ಮ ಲಿಂಗಗಳ ಭೇದವಿಲ್ಲದೆ ಜನರ ಆಶೀರ್ವಾದದಿಂದ ಜನಪ್ರತಿನಿಧಿಯಾಗುವ ಅವಕಾಶವನ್ನು ಪ್ರಜಾಪ್ರಭುತ್ವ ಕಲ್ಪಿಸಿಕೊಟ್ಟಿದ್ದು, ಇಂತಹ ಪವಿತ್ರ ಸನ್ನಿವೇಶದಲ್ಲಿ ಜನರ ಬೇಕು ಬೇಡಗಳ, ದುಃಖ ದುಮ್ಮಾನಗಳನ್ನು ಆಲಿಸುವ, ಚರ್ಚಿಸುವ, ನಿರ್ವಹಿಸುವ ಔದಾರ್ಯವನ್ನು ಪ್ರತಿಯೊಬ್ಬ ಜನಪ್ರತಿನಿಧಿಯು ತೋರಬೇಕು. ಪಕ್ಷಬೇಧ ಮರೆತು ಪರಸ್ಪರ ವಿಶ್ವಾಸಾರ್ಹತೆಯಿಂದ ವರ್ತಿಸಿ ಎಲ್ಲಾ ಜನಪ್ರತಿನಿಧಿಗಳು ನಾಡಿನ ಹಾಗೂ ದೇಶದ ಅಭ್ಯುದಯಕ್ಕೆ ಕಟಿಬದ್ಧರಾಗುವ ಆವಶ್ಯಕತೆಯಿದೆ ಎಂದರು.

ಸಂಸದೀಯ ಮೌಲ್ಯಗಳನ್ನು ಇನ್ನಷ್ಟು ಹೆಚ್ಚಿಸುವ ನಿಟ್ಟಿನಲ್ಲಿ ಚಿಂತನೆ ನಡೆಸಿ ಅವುಗಳ ಕಾರ್ಯರೂಪಕ್ಕೆ ಪರಿಣಾಮಕಾರಿಯಾಗಿ ಕ್ರಮ ಕೈಗೊಳ್ಳುವುದು ನಮ್ಮೆಲ್ಲರ ಆದ್ಯತೆಯಾಗಬೇಕಿದೆ. ಜನರಿಂದ ಆಯ್ಕೆಯಾದ ಪ್ರತಿಯೊಬ್ಬ ಪ್ರತಿನಿಧಿಯು ನಿರ್ದಿಷ್ಟ ನೀತಿ ಸಂಹಿತೆಯನ್ನು ಅಳವಡಿಸಿಕೊಳ್ಳುವ ಮೂಲಕ ನಮ್ಮ ಪೂರ್ವಿಕ ಸಂಸದೀಯ ಪಟುಗಳ ಹೆಜ್ಜೆ ಗುರುತುಗಳಲ್ಲಿರುವ ತತ್ವಾದರ್ಶ ಮೌಲ್ಯಗಳನ್ನು ಸಕಾಲಿಕ ವಿವೇಕದೊಂದಿಗೆ ಗ್ರಹಿಸಿ ಅವುಗಳನ್ನು ಕಾರ್ಯರೂಪಗೊಳಿಸುವ ಸಂಕಲ್ಪ ಮಾಡಬೇಕಾಗಿರುವುದು ಇಂದಿನ ತುರ್ತು ಅವಶ್ಯಕತೆಯಾಗಿದೆ ಎಂದು ತಿಳಿಸಿದರು.

ಮೂರು ದಿನಗಳ ಕಾಲ ನಡೆಯುವ ಸಮ್ಮೇಳನದಲ್ಲಿ ದೇಶದ ಎಲ್ಲಾ ರಾಜ್ಯಗಳ ವಿಧಾನ ಸಭೆಯ ಸಭಾಧ್ಯಕ್ಷರು, ಉಪಸಭಾಧ್ಯಕ್ಷರುಗಳು ಹಾಗೂ ವಿಧಾನ ಪರಿಷತ್ತಿನ ಸಭಾಪತಿ ಹಾಗೂ ಉಪಸಭಾಪತಿಗಳು ಭಾಗವಹಿಸಿದ್ದರು. ಲೋಕಸಭಾಧ್ಯಕ್ಷ ಓಂ ಬಿರ್ಲಾ, ರಾಜಸ್ಥಾನದ ಮುಖ್ಯಮಂತ್ರಿ ಅಶೋಕ ಗೆಹ್ಲೋಟ್ ಭಾಗವಹಿಸಿದ್ದರು.

# ಜನಪ್ರತಿನಿಧಿಗಳಿಗೆ ಅಭಿವೃದ್ಧಿಪರ ಚಿಂತನೆ ಅವಶ್ಯ

## ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿಮತ

**ಹುಬ್ಬಳ್ಳಿ:** ದೇಶದ ಪ್ರಗತಿ ಮುನ್ನೋಟವು ಪ್ರಜಾಪ್ರಭುತ್ವ ಸಂಸ್ಥೆಗಳ ಪರಿಣಾಮಕಾರಿ ಕಾರ್ಯಚಟುವಟಿಕೆಗಳ ಮೇಲೆ ಅವಲಂಬಿತವಾಗಿದೆ. ಜನಪ್ರತಿನಿಧಿಗಳ ಕ್ರಿಯಾಶೀಲತೆ ಮತ್ತು ಅಭಿವೃದ್ಧಿಪರ ಚಿಂತನೆಯಿಂದ ರಾಷ್ಟ್ರದ ಭವಿಷ್ಯ ಉಜ್ವಲವಾಗಬಲ್ಲದು ಎಂದು ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿಮತ ವ್ಯಕ್ತಪಡಿಸಿದರು.

ರಾಜಸ್ಥಾನ ರಾಜ್ಯದ ಉದಯಪುರದಲ್ಲಿ ನಡೆಯುತ್ತಿರುವ ಮೂರು ದಿನಗಳ 9ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನದಲ್ಲಿ 'ಪ್ರಜಾಪ್ರಭುತ್ವ ಸಂಸ್ಥೆಗಳ ಮೂಲಕ ರಾಷ್ಟ್ರವನ್ನು ಸದೃಢಗೊಳಿಸುವಲ್ಲಿ ಜನಪ್ರತಿನಿಧಿಗಳ ಪಾತ್ರ' ಎಂಬ ವಿಷಯದ ಕುರಿತು ವಿಷಯ ಮಂಡನೆ ಮಾಡಿದರು.

140 ಕೋಟಿ ಜನಸಂಖ್ಯೆ ಹೊಂದಿದ ಈ ದೇಶದಲ್ಲಿ ವಿವಿಧ ಭಾಷೆ, ಹಲವು ಆಚಾರ ವಿಚಾರಗಳನ್ನು ಹಾಗೂ ಸಂಪ್ರದಾಯಗಳನ್ನು ಹೊಂದಿದ ಜನರಿದ್ದೇವೆ. ನಮ್ಮ ದೇಶದಲ್ಲಿ ಪ್ರಜಾಪ್ರಭುತ್ವ ಅಷ್ಟೇ ಗಟ್ಟಿಯಾಗಿ ಕಳೆದ 75 ವರ್ಷಗಳಿಂದ ಜನರ ಹಿತಕ್ಕಾಗಿ ಕೆಲಸ ಮಾಡುತ್ತ ಬಂದಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು.

ಜಗತ್ತಿನಲ್ಲಿಯೇ ಅತ್ಯಂತ ದೊಡ್ಡ ಪ್ರಜಾಪ್ರಭುತ್ವ ಹೊಂದಿದ ದೇಶ ನಮ್ಮದು. ನನ್ನ 43 ವರ್ಷದ ಶಾಸನ ಸಭೆಯ ಅನುಭವಗಳನ್ನು ಇಂತಹ ಸಮ್ಮೇಳನಗಳಲ್ಲಿ ಹಂಚಿಕೊಳ್ಳಲು ಖುಷಿ ಸಹ ಆಗುತ್ತದೆ. ದೇಶದ ಮೂಲೆ ಮೂಲೆಯಿಂದ ಬಂದ ಜನಪ್ರತಿನಿಧಿಗಳೊಂದಿಗೆ ರಾಷ್ಟ್ರದ ಹಿತಕ್ಕಾಗಿ ಹತ್ತಾರು ಮಹತ್ವದ ಸಂಗತಿಗಳನ್ನು ಚಿಂತನ ಮಂಥನಗೈಯ್ಯುವ ಈ ಸಮ್ಮೇಳನ ಅತ್ಯಂತ ಮಹತ್ವದ್ದಾಗಿದೆ ಎಂದರು.

ಲೋಕಸಭಾಧ್ಯಕ್ಷ ಓಂ ಬಿರ್ಲಾ, ರಾಜಸ್ಥಾನದ ಮುಖ್ಯಮಂತ್ರಿ ಅಶೋಕ ಗೆಹ್ಲೋಟ್, ರಾಜ್ಯಸಭೆಯ ಉಪಸಭಾಪತಿ ಹರಿವಂಶ, ರಾಜಸ್ಥಾನದ ವಿಧಾನಸಭಾಧ್ಯಕ್ಷ ಸಿ.ಪಿ ಜೋಶಿ, ಕರ್ನಾಟಕದ ಪ್ರತಿನಿಧಿಗಳಾದ ವಿಧಾನಸಭಾಧ್ಯಕ್ಷರಾದ ಯು.ಟಿ.ಖಾದರ್, ವಿಧಾನಪರಿಷತ್ತಿನ ಉಪ ಸಭಾಪತಿಗಳಾದ ಎಂ.ಕೆ.ಪ್ರಾಣೇಶ್, ಅಧಿಕಾರಿ ವೃಂದದ ಪರವಾಗಿ ಭಾಗವಹಿಸಿದ ಪರಿಷತ್ತಿನ ಕಾರ್ಯದರ್ಶಿ ಕೆ.ಆರ್.ಮಹಾಲಕ್ಷ್ಮಿ, ಸಭಾಪತಿಗಳ ಆಪ್ತ ಕಾರ್ಯದರ್ಶಿ ಶೈಲಾ ಕೆ.ಡಿ. ಸೇರಿದಂತೆ ರಾಜಸ್ಥಾನದ ಶಾಸಕರು, ಸಂಸದರು ಸಮಾರಂಭದಲ್ಲಿ ಭಾಗವಹಿಸಿದ್ದರು.



ರಾಜಸ್ಥಾನ ಉದಯಪುರದಲ್ಲಿ ನಡೆದ 9ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನದಲ್ಲಿ ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿದರು.

Hubli Edition

# ಪ್ರಜಾಪ್ರಭುತ್ವದ ಬಲವರ್ಧನೆಗೆ ಜನಪ್ರತಿನಿಧಿಗಳ ಹಾಗೂ ಸಂಸ್ಥೆಗಳ ಪಾತ್ರ ಮಹತ್ವದ್ದು : ಹೊರಟ್ಟಿ

ಉದಯಪುರ 22: 9 ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನ - ದೇಶದ ಸರ್ವಾಂಗೀಣ ಬೆಳವಣಿಗೆಯಲ್ಲಿ ಪ್ರಜಾಪ್ರಭುತ್ವ ಸಂಸ್ಥೆಗಳ ಪಾತ್ರ ಮಹತ್ತರವಾದುದು ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅಭಿಮತ.

ದೇಶದ ಪ್ರಗತಿ ಹಾಗೂ ಅಭಿವೃದ್ಧಿಯ ಮುನ್ನೋಟವು ಪ್ರಜಾಪ್ರಭುತ್ವ ಸಂಸ್ಥೆಗಳ ಪರಿಣಾಮಕಾರಿ ಕಾರ್ಯಚಟುವಟಿಕೆಗಳ ಮೇಲೆ ಅವಲಂಬಿತವಾಗಿದ್ದು, ಜನಪ್ರತಿನಿಧಿಗಳ ಕ್ರಿಯಾಶೀಲತೆ ಹಾಗೂ ಪಕ್ಷಬೇಧವಿಲ್ಲದ ಅಭಿವೃದ್ಧಿಪರ ಚಿಂತನೆಯಿಂದ ಮಾತ್ರ ರಾಷ್ಟ್ರದ ಭವಿಷ್ಯ ಉಜ್ವಲವಾಗಲ್ಲದು ಎಂದು ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅಭಿಮತ ವ್ಯಕ್ತಪಡಿಸಿದರು.

ರಾಜಸ್ಥಾನ ರಾಜ್ಯದ ಉದಯಪುರದಲ್ಲಿ ನಡೆಯುತ್ತಿರುವ ಮೂರು ದಿನಗಳ 9ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನದಲ್ಲಿ "ಪ್ರಜಾಪ್ರಭುತ್ವ ಸಂಸ್ಥೆಗಳ ಮೂಲಕ ರಾಷ್ಟ್ರವನ್ನು ಸದೃಢಗೊಳಿಸುವಲ್ಲಿ ಜನಪ್ರತಿನಿಧಿಗಳ ಪಾತ್ರ" ಎಂಬ ವಿಷಯದ ಕುರಿತು ಅವರು ವಿಚಾರ ಮಂಡಿಸಿದರು.

ಪ್ರಜಾಪ್ರಭುತ್ವ ಬಲವರ್ಧನೆಗೊಳ್ಳುವಲ್ಲಿ ಜನಪ್ರತಿನಿಧಿಗಳ ಪಾತ್ರ ಸಹ ಅಷ್ಟೇ ಮಹತ್ವದ್ದು ಜಗತ್ತಿನಲ್ಲಿಯೇ ಅತ್ಯಂತ ದೊಡ್ಡ ಪ್ರಜಾಪ್ರಭುತ್ವ ಹೊಂದಿದ ದೇಶ ನಮ್ಮದು 140 ಕೋಟಿಗೂ ಹೆಚ್ಚು ಜನಸಂಖ್ಯೆ ಹೊಂದಿದ ಈ ದೇಶದಲ್ಲಿ ವಿವಿಧ ಭಾಷೆ, ಹಲವು ಆಚಾರ ವಿಚಾರಗಳನ್ನು ಹಾಗೂ ಸಂಪ್ರದಾಯಗಳನ್ನು ಹೊಂದಿದ ನಮ್ಮ ದೇಶದಲ್ಲಿ ಪ್ರಜಾಪ್ರಭುತ್ವ ಅಷ್ಟೇ ಗಟ್ಟಿಯಾಗಿ ಕಳೆದ 75 ವರ್ಷಗಳಿಂದ ಜನರ ಹಿತಕ್ಕಾಗಿ ಕೆಲಸ ಮಾಡುತ್ತಾ ಬಂದಿರುವುದಕ್ಕೆ ಹೆಮ್ಮೆ ಎನಿಸುತ್ತದೆ.

ಪ್ರಜಾಪ್ರಭುತ್ವದ ಸಾರ್ಥಕತೆಯಲ್ಲಿ ಜನಪ್ರತಿನಿಧಿಗಳ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಜನರ ಸಂಕಷ್ಟ, ಬವಣೆಗಳ ಧ್ವನಿಗೆ ಜನಪ್ರತಿನಿಧಿಗಳು ಕಿವಿಯಾದಾಗ ಮಾತ್ರ ಪ್ರಜಾಪ್ರಭುತ್ವಕ್ಕೆ ನೈಜ ಅರ್ಥ ಬರುತ್ತದೆ. ಜನರ ಮಾನವೀಯ ಅಗತ್ಯತೆಗಳನ್ನು ಕಾನೂನಿನ ಚೌಕಟ್ಟಿಗೆ ತರುವುದೇ ಶಾಸನ ರಚನೆ ಆಗಿದ್ದು, ಈ ಹಂತದಲ್ಲಿ ಕಾರ್ಯಾಂಗ ಮತ್ತು ಶಾಸಕಾಂಗಳೆರಡು ರಥದ ಜೋಡಿ ಗಾಲಿಗಳ ಹಾಗೆ ಚಲಿಸಿದರೆ ಮಾತ್ರ ಪ್ರಜಾಪ್ರಭುಯತ್ವ ಯಶಸ್ವಿಯಾಗುತ್ತದೆ. ಪ್ರಜಾಪ್ರಭುತ್ವದ ಮುಖ್ಯ ಉದ್ದೇಶಗಳನ್ನು ಅತ್ಯಂತ ದಕ್ಷ ಹಾಗೂ ಪರಿಪೂರ್ಣ ನೆಲೆಗಳಲ್ಲಿ ಈಡೇರಿಸಲು ಇರುವ ಏಕೈಕ ವೇದಿಕೆ ಎಂದರೆ ಉಭಯ ಮಂಡಲದ ಸದನಗಳು ಎಂದು ಹೊರಟ್ಟಿ ಬಣ್ಣಿಸಿದರು.

ದೇಶದ ಉನ್ನತಿಯಲ್ಲಿ ಜನಪ್ರತಿನಿಧಿಗಳ ಪಾತ್ರ ಹಾಗೂ ನಡವಳಿಕೆ ಕುರಿತು ತಮ್ಮ ನಾಲ್ಕು ದಶಕಗಳ ಅನುಭವವನ್ನು ಮೆಲುಕು ಹಾಕಿದ ಶ್ರೀ ಬಸವರಾಜ ಹೊರಟ್ಟಿ ಜಾತಿ, ಧರ್ಮ ಲಿಂಗಗಳ ಭೇದವಿಲ್ಲದೆ ಜನರ ಆಶೀರ್ವಾದದಿಂದ ಜನಪ್ರತಿನಿಧಿಯಾಗುವ ಅವಕಾಶವನ್ನು ಪ್ರಜಾಪ್ರಭುತ್ವ ಕಲ್ಪಿಸಿಕೊಟ್ಟಿದ್ದು, ಇಂತಹ ಪವಿತ್ರ ಸನ್ನಿವೇಶದಲ್ಲಿ ಜನರ ಬೇಕು ಬೇಡಗಳ, ದುಃಖ ದುಮ್ಮಾನಗಳನ್ನು ಆಲಿಸುವ, ಚರ್ಚಿಸುವ, ನಿರ್ವಹಿಸುವ ಜಿದ್ದಾರ್ಯವನ್ನು ಪ್ರತಿಯೊಬ್ಬ ಜನಪ್ರತಿನಿಧಿಯು ತೋರಬೇಕು. ಪಕ್ಷಬೇಧ ಮರೆತು ಪರಸ್ಪರ ವಿಶ್ವಾಸಾರ್ಹತೆಯಿಂದ ವರ್ತಿಸಿ ಎಲ್ಲಾ ಜನಪ್ರತಿನಿಧಿಗಳು ನಾಡಿನ ಹಾಗೂ ದೇಶದ ಅಭ್ಯುದಯಕ್ಕೆ ಕಟಿಬದ್ಧರಾಗುವ ಅವಶ್ಯಕತೆಯಿದೆ. ಸಂಸದೀಯ ಮೌಲ್ಯಗಳನ್ನು ಇನ್ನಷ್ಟು ಹೆಚ್ಚಿಸುವ ನಿಟ್ಟಿನಲ್ಲಿ ಚಿಂತನೆ ನಡೆಸಿ ಅವುಗಳ ಕಾರ್ಯರೂಪಕ್ಕೆ ಪರಿಣಾಮಕಾರಿಯಾಗಿ ಕ್ರಮ ಕೈಗೊಳ್ಳುವುದು ನಮ್ಮೆಲ್ಲರ ಆದ್ಯತೆಯಾಗಬೇಕಿದೆ. ಜನರಿಂದ ಆಯ್ಕೆಯಾದ ಪ್ರತಿಯೊಬ್ಬ ಪ್ರತಿನಿಧಿಯು ನಿರ್ಧಿಷ್ಟ ನೀತಿ ಸಂಹಿತೆಯನ್ನು ಅಳವಡಿಸಿಕೊಳ್ಳುವ ಮೂಲಕ ನಮ್ಮ ಪೂರ್ವಿಕ ಸಂಸದೀಯ ಪಟುಗಳ ಹೆಜ್ಜೆಗುರುತುಗಳಲ್ಲಿರುವ ತತ್ವಾದರ್ಶ ಮೌಲ್ಯಗಳನ್ನು ಸಕಾಲಿಕ ವಿವೇಕದೊಂದಿಗೆ ಗ್ರಹಿಸಿ ಅವುಗಳನ್ನು ಕಾರ್ಯರೂಪಗೊಳಿಸುವ ಸಂಕಲ್ಪ ಮಾಡಬೇಕಾಗಿರುವುದು ಇಂದಿನ ತುರ್ತು ಅವಶ್ಯಕತೆಯಾಗಿದೆ ಎಂದು ಬಸವರಾಜ ಹೊರಟ್ಟಿ ತಿಳಿಸಿದರು.

ಸಂಯುಕ್ತ ಕರ್ನಾಟಕ

## ಚುಟುಕು ಸುದ್ದಿ

### ಉಪತಹಶೀಲ್ದಾರ್ ಲೋಕಾ ಬಲೆಗೆ

ಶಿವಮೊಗ್ಗ: ಖಾತೆ ಬದಲಾವಣೆಗಾಗಿ ಲಂಚ ಸ್ವೀಕರಿಸುತ್ತಿದ್ದ ಉಪತಹಶೀಲ್ದಾರ್ ಹಾಗೂ ಮಧ್ಯವರ್ತಿ ಮಂಗಳವಾರ ಲೋಕಾಯುಕ್ತ ಅಧಿಕಾರಿಗಳ ಬಲೆಗೆ ಬಿದ್ದಿದ್ದಾರೆ. ಹೊಳೆಹೊನ್ನೂರು ನಾಡಕಚೇರಿಯ ಉಪತಹಶೀಲ್ದಾರ್ ಪರಮೇಶ್ವರ್ (59) ಹಾಗೂ ಮಧ್ಯವರ್ತಿ ಪ್ರಕಾಶ್‌ನಾಯ್ಕ (32) ಖಾತೆ ಬದಲಾವಣೆಗಾಗಿ 40 ಸಾವಿರ ರೂ. ಲಂಚದ ಬೇಡಿಕೆ ಇಟ್ಟಿದ್ದು, 30 ಸಾವಿರ ರೂ. ಸ್ವೀಕರಿಸುವಾಗ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಶಿವರಾಜ್ ಎಂಬುವವರು ದೂರು ನೀಡಿದ್ದ ಹಿನ್ನೆಲೆಯಲ್ಲಿ ಲೋಕಾಯುಕ್ತ ಡಿವೈಎಸ್‌ಪಿ ಉಮೇಶ್ ಈಶ್ವರ್‌ನಾಯ್ಕ್ ನೇತೃತ್ವದಲ್ಲಿ ದಾಳಿ ನಡೆಸಲಾಗಿದೆ. ಇಬ್ಬರನ್ನೂ ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

### ಸಭೆಗೆ ಗ್ರಾಪಂ ಸದಸ್ಯೆಯರ ಜಾಗದಲ್ಲಿ ಪತಿ–ಮಕ್ಕಳು

# ಜನಪ್ರತಿನಿಧಿಗಳಿಗೆ ಅಭಿವೃದ್ಧಿಪರ ಚಿಂತನೆ ಅವಶ್ಯ

## ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿಮತ

ಹುಬ್ಬಳ್ಳಿ: ದೇಶದ ಪ್ರಗತಿ ಮುನ್ನೋಟವು ಪ್ರಜಾಪ್ರಭುತ್ವ ಸಂಸ್ಥೆಗಳ ಪರಿಣಾಮಕಾರಿ ಕಾರ್ಯಚಟುವಟಿಕೆಗಳ ಮೇಲೆ ಅವಲಂಬಿತವಾಗಿದೆ. ಜನಪ್ರತಿನಿಧಿಗಳ ಕ್ರಿಯಾಶೀಲತೆ ಮತ್ತು ಅಭಿವೃದ್ಧಿಪರ ಚಿಂತನೆಯಿಂದ ರಾಷ್ಟ್ರದ ಭವಿಷ್ಯ ಉಜ್ವಲವಾಗಬಲ್ಲದು ಎಂದು ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿಮತ ವ್ಯಕ್ತಪಡಿಸಿದರು.

ರಾಜಸ್ಥಾನ ರಾಜ್ಯದ ಉದಯಪುರದಲ್ಲಿ ನಡೆಯುತ್ತಿರುವ ಮೂರು ದಿನಗಳ 9ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನದಲ್ಲಿ 'ಪ್ರಜಾಪ್ರಭುತ್ವ ಸಂಸ್ಥೆಗಳ ಮೂಲಕ ರಾಷ್ಟ್ರವನ್ನು ಸದೃಢಗೊಳಿಸುವಲ್ಲಿ ಜನಪ್ರತಿನಿಧಿಗಳ ಪಾತ್ರ' ಎಂಬ ವಿಷಯದ ಕುರಿತು ವಿಷಯ ಮಂಡನೆ ಮಾಡಿದರು.

140 ಕೋಟಿ ಜನಸಂಖ್ಯೆ ಹೊಂದಿದ ಈ ದೇಶದಲ್ಲಿ ವಿವಿಧ ಭಾಷೆ, ಹಲವು ಆಚಾರ ವಿಚಾರಗಳನ್ನು ಹಾಗೂ ಸಂಪ್ರದಾಯಗಳನ್ನು ಹೊಂದಿದ ಜನರಿದ್ದೇವೆ. ನಮ್ಮ ದೇಶದಲ್ಲಿ ಪ್ರಜಾಪ್ರಭುತ್ವ ಅಷ್ಟೇ ಗಟ್ಟಿಯಾಗಿ ಕಳೆದ 75 ವರ್ಷಗಳಿಂದ ಜನರ ಹಿತಕ್ಕಾಗಿ ಕೆಲಸ ಮಾಡುತ್ತ ಬಂದಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು.

ಜಗತ್ತಿನಲ್ಲಿಯೇ ಅತ್ಯಂತ ದೊಡ್ಡ ಪ್ರಜಾಪ್ರಭುತ್ವ ಹೊಂದಿದ ದೇಶ ನಮ್ಮದು. ನನ್ನ 43 ವರ್ಷದ ಶಾಸನ ಸಭೆಯ ಅನುಭವಗಳನ್ನು ಇಂತಹ ಸಮ್ಮೇಳನಗಳಲ್ಲಿ ಹಂಚಿಕೊಳ್ಳಲು ಖುಷಿ ಸಹ ಆಗುತ್ತದೆ. ದೇಶದ ಮೂಲೆ ಮೂಲೆಯಿಂದ ಬಂದ ಜನಪ್ರತಿನಿಧಿಗಳೊಂದಿಗೆ ರಾಷ್ಟ್ರದ ಹಿತಕ್ಕಾಗಿ ಹತ್ತಾರು ಮಹತ್ವದ ಸಂಗತಿಗಳನ್ನು ಚಿಂತನ ಮಂಥನಗೈಯ್ಯುವ ಈ ಸಮ್ಮೇಳನ ಅತ್ಯಂತ ಮಹತ್ವದ್ದಾಗಿದೆ ಎಂದರು.

ಲೋಕಸಭಾಧ್ಯಕ್ಷ ಓಂ ಬಿರ್ಲಾ, ರಾಜಸ್ಥಾನದ ಮುಖ್ಯಮಂತ್ರಿ ಅಶೋಕ ಗೆಹ್ಲೋಟ್, ರಾಜ್ಯಸಭೆಯ ಉಪಸಭಾಪತಿ ಹರಿವಂಶ, ರಾಜಸ್ಥಾನದ ವಿಧಾನಸಭಾಧ್ಯಕ್ಷ ಸಿ.ಪಿ ಜೋಶಿ, ಕರ್ನಾಟಕದ ಪ್ರತಿನಿಧಿಗಳಾದ ವಿಧಾನಸಭಾಧ್ಯಕ್ಷರಾದ ಯು.ಟಿ.ಖಾದರ್, ವಿಧಾನಪರಿಷತ್ತಿನ ಉಪ ಸಭಾಪತಿಗಳಾದ ಎಂ.ಕೆ.ಪ್ರಾಣೇಶ್, ಅಧಿಕಾರಿ ವೃಂದದ ಪರವಾಗಿ ಭಾಗವಹಿಸಿದ ಪರಿಷತ್ತಿನ ಕಾರ್ಯದರ್ಶಿ ಕೆ.ಆರ್.ಮಹಾಲಕ್ಷ್ಮಿ, ಸಭಾಪತಿಗಳ ಆಪ್ತ ಕಾರ್ಯದರ್ಶಿ ಶೈಲಾ ಕೆ.ಡಿ. ಸೇರಿದಂತೆ ರಾಜಸ್ಥಾನದ ಶಾಸಕರು, ಸಂಸದರು ಸಮಾರಂಭದಲ್ಲಿ ಭಾಗವಹಿಸಿದ್ದರು.




ರಾಜಸ್ಥಾನ ಉದಯಪುರದಲ್ಲಿ ನಡೆದ 9ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನದಲ್ಲಿ ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿದರು.

# ಉದಯಪುರದಲ್ಲಿ ನಡೆದ 9ನೇ ಕಾಮನವೆಲ್ತ್ ಸಂಸದೀಯ ಸಮ್ಮೇಳನ

## ಪ್ರಜಾಪ್ರಭುತ್ವದ ಬಲವರ್ಧನೆಗೆ ಜನಪ್ರತಿನಿಧಿಗಳ ಹಾಗೂ ಸಂಸ್ಥೆಗಳ ಪಾತ್ರ ಮಹತ್ವದ್ದು: ಹೊರಟ್ಟಿ ಅಭಿಮತ




**ಉದಯಪುರ:** 9 ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನ – ದೇಶದ ಸರ್ವಾಂಗೀಣ ಬೆಳವಣಿಗೆಯಲ್ಲಿ ಪ್ರಜಾಪ್ರಭುತ್ವ ಸಂಸ್ಥೆಗಳ ಪಾತ್ರ ಮಹತ್ವದ್ದಾದುದು ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅಭಿಮತ.

ದೇಶದ ಪ್ರಗತಿ ಹಾಗೂ ಅಭಿವೃದ್ಧಿಯ ಮುನ್ನೋಟವು ಪ್ರಜಾಪ್ರಭುತ್ವ ಸಂಸ್ಥೆಗಳ ಪರಿಣಾಮಕಾರಿ ಕಾರ್ಯಚಟುವಟಿಕೆಗಳ ಮೇಲೆ ಅವಲಂಬಿತವಾಗಿದ್ದು, ಜನಪ್ರತಿನಿಧಿಗಳ ಕ್ರಿಯಾಶೀಲತೆ ಹಾಗೂ ಪಕ್ಷಭೇದವಿಲ್ಲದ ಅಭಿವೃದ್ಧಿಪರ ಚಿಂತನೆಯಿಂದ ಮಾತ್ರ ರಾಷ್ಟ್ರದ ಭವಿಷ್ಯ ಉಜ್ವಲವಾಗಬಲ್ಲದು ಎಂದು ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅಭಿಮತ ವ್ಯಕ್ತಪಡಿಸಿದರು.

ರಾಜಸ್ಥಾನ ರಾಜ್ಯದ ಉದಯಪುರದಲ್ಲಿ ನಡೆಯುತ್ತಿರುವ ಮೂರು ದಿನಗಳ 9ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನದಲ್ಲಿ "ಪ್ರಜಾಪ್ರಭುತ್ವ ಸಂಸ್ಥೆಗಳ ಮೂಲಕ ರಾಷ್ಟ್ರವನ್ನು ಸದೃಢಗೊಳಿಸುವಲ್ಲಿ ಜನಪ್ರತಿನಿಧಿಗಳ ಪಾತ್ರ" ಎಂಬ ವಿಷಯದ ಕುರಿತು ಅವರು ವಿಚಾರ ಮಂಡಿಸಿದರು.ಪ್ರಜಾಪ್ರಭುತ್ವ ಬಲವರ್ಧನೆಗೊಳ್ಳುವಲ್ಲಿ ಜನಪ್ರತಿನಿಧಿಗಳ ಪಾತ್ರ ಸಹ ಅಷ್ಟೇ ಮಹತ್ವದ್ದು ಜಗತ್ತಿನಲ್ಲಿಯೇ ಅತ್ಯಂತ ದೊಡ್ಡ ಪ್ರಜಾಪ್ರಭುತ್ವ ಹೊಂದಿದ ದೇಶ ನಮ್ಮದು 140 ಕೋಟಿಗೂ ಹೆಚ್ಚು ಜನಸಂಖ್ಯೆ ಹೊಂದಿದ ಈ ದೇಶದಲ್ಲಿ ವಿವಿಧ ಭಾಷೆ, ಹಲವು ಆಚಾರ ವಿಚಾರಗಳನ್ನು ಹಾಗೂ ಸಂಪ್ರದಾಯಗಳನ್ನು ಹೊಂದಿದ ನಮ್ಮ ದೇಶದಲ್ಲಿ ಪ್ರಜಾಪ್ರಭುತ್ವ ಅಷ್ಟೇ ಗಟ್ಟಿಯಾಗಿ ಕಳೆದ 75 ವರ್ಷಗಳಿಂದ ಜನರ ಹಿತಕ್ಕಾಗಿ ಕೆಲಸ ಮಾಡುತ್ತಾ ಬಂದಿರುವುದಕ್ಕೆ ಹೆಮ್ಮೆ ಎನಿಸುತ್ತದೆ.ನನ್ನ 43 ವರ್ಷದ ಶಾಸನ ಸಭೆಯ ಅನುಭವಗಳನ್ನು ಇಂತಹ ಸಮ್ಮೇಳನಗಳಲ್ಲಿ ಹಂಚಿಕೊಳ್ಳಲು ಖುಷಿ ಸಹ ಆಗಿದೆ. ದೇಶದ ಮೂಲೆ ಮೂಲೆಯಿಂದ ಬಂದ ಜನಪ್ರತಿನಿಧಿಗಳೊಂದಿಗೆ ರಾಷ್ಟ್ರದ ಹಿತಕ್ಕಾಗಿ ಹತ್ತಾರು ಮಹತ್ವದ ಸಂಗತಿಗಳನ್ನು ಚಿಂತನ ಮಂಥನಗೈಯುವ ಈ ಸಮ್ಮೇಳನ ಅತ್ಯಂತ ಮಹತ್ವದ್ದು.

ನಾಗರೀಕ ಸಮಾಜ ಹೆಚ್ಚು ಪ್ರಜಾಸತ್ತಾತ್ಮಕವಾಗಿರಬೇಕೆನ್ನುವುದು ಪ್ರಜಾಪ್ರಭುತ್ವದ ಮೂಲ ಆಶಯವಾಗಿದ್ದು, ಈ ಆಶಯಕ್ಕೆ ಪೂರಕವಾಗಿ ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ, ಜಾತ್ಯಾತೀತತೆ, ಧಾರ್ಮಿಕ ಸಹಿಷ್ಣುತೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಹಿಂದುಳಿದ ಹಾಗೂ ದಮನಿತ ವರ್ಗಗಳ ಏಳಿಗೆಗಾಗಿ ನಮ್ಮ ಸಂವಿಧಾನದಲ್ಲಿ ಸಂಸದೀಯ ಮೌಲ್ಯಗಳನ್ನು ರೂಪಿಸಲಾಗಿದೆ ಇದು ಇಂದಿನ ಆಧುನಿಕ ವಿಚಾರವೆನಿಸಿದರೂ ಈ ವೈಜ್ಞಾನಿಕ ಪರಿಕಲ್ಪನೆಯು 12ನೇ ಶತಮಾನದಲ್ಲಿಯೇ ಕರ್ನಾಟಕದಲ್ಲಿ ಬೀಜಾಂಕುರವಾಗಿರುವುದು ಅಭಿಮಾನದ ಸಂಗತಿ. ಜನಸಾಮಾನ್ಯರ ಬದುಕಿಗೆ ಧ್ವನಿಯಾದ ಜಗಜ್ಯೋತಿ ಬಸವೇಶ್ವರರು ಪ್ರತಿಪಾದಿಸಿದ ಆದರ್ಶ ನೈತಿಕ ಮೌಲ್ಯಗಳೇ ಪ್ರಜಾಪ್ರಭುತ್ವದ ಪರಿಕಲ್ಪನೆಗೆ ಅಡಿಪಾಯ ಒದಗಿಸಿವೆ ಎಂದು ಹೊರಟ್ಟಿ ಅವರು ತಿಳಿಸಿದರು.

ಪ್ರಜಾಪ್ರಭುತ್ವದ ಸಾರ್ಥಕತೆಯಲ್ಲಿ ಜನಪ್ರತಿನಿಧಿಗಳ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಜನರ ಸಂಕಷ್ಟ, ಬವಣೆಗಳ ಧ್ವನಿಗೆ ಜನಪ್ರತಿನಿಧಿಗಳು ಕಿವಿಯಾದಾಗ ಮಾತ್ರ ಪ್ರಜಾಪ್ರಭುತ್ವಕ್ಕೆ ನೈಜ ಅರ್ಥ ಬರುತ್ತದೆ. ಜನರ ಮಾನವೀಯ ಅಗತ್ಯತೆಗಳನ್ನು ಕಾನೂನಿನ ಚೌಕಟ್ಟಿಗೆ ತರುವುದೇ ಶಾಸನ ರಚನೆ ಆಗಿದ್ದು, ಈ ಹಂತದಲ್ಲಿ ಕಾರ್ಯಾಂಗ ಮತ್ತು ಶಾಸಕಾಂಗಗಳೆರಡು ರಥದ ಜೋಡಿ ಗಾಲಿಗಳ ಹಾಗೆ ಚಲಿಸಿದರೆ ಮಾತ್ರ ಪ್ರಜಾಪ್ರಭುತ್ವ ಯಶಸ್ವಿಯಾಗುತ್ತದೆ. ಪ್ರಜಾಪ್ರಭುತ್ವದ ಮುಖ್ಯ ಉದ್ದೇಶಗಳನ್ನು ಅತ್ಯಂತ ದಕ್ಷ ಹಾಗೂ ಪರಿಪೂರ್ಣ ನೆಲೆಗಳಲ್ಲಿ ಈಡೇರಿಸಲು ಇರುವ ಏಕೈಕ ವೇದಿಕೆ ಎಂದರೆ ಉಭಯ ಮಂಡಲದ ಸದನಗಳು ಎಂದು ಹೊರಟ್ಟಿ ಬಣ್ಣಿಸಿದರು. ದೇಶದ ಉನ್ನತಿಯಲ್ಲಿ ಜನಪ್ರತಿನಿಧಿಗಳ ಪಾತ್ರ ಹಾಗೂ ನಡವಳಿಕೆ ಕುರಿತು ತಮ್ಮ ನಾಲ್ಕು ದಶಕಗಳ ಅನುಭವವನ್ನು ಮೆಲುಕು ಹಾಕಿದ ಬಸವರಾಜ ಹೊರಟ್ಟಿ ಜಾತಿ, ಧರ್ಮ ಲಿಂಗಗಳ ಭೇದವಿಲ್ಲದೆ ಜನರ ಆಶೀರ್ವಾದದಿಂದ ಜನಪ್ರತಿನಿಧಿಯಾಗುವ ಅವಕಾಶವನ್ನು ಪ್ರಜಾಪ್ರಭುತ್ವ ಕಲ್ಪಿಸಿಕೊಟ್ಟಿದ್ದು, ಇಂತಹ ಪವಿತ್ರ ಸನ್ನಿವೇಶದಲ್ಲಿ ಜನರ ಬೇಕು ಬೇಡಗಳ, ದುಃಖ ದುಮ್ಮಾನಗಳನ್ನು ಆಲಿಸುವ, ಚರ್ಚಿಸುವ, ನಿರ್ವಹಿಸುವ ಜವಾಬ್ದಾರಿಯನ್ನು ಪ್ರತಿಯೊಬ್ಬ ಜನಪ್ರತಿನಿಧಿಯು ತೋರಬೇಕು. ಪಕ್ಷಭೇದ ಮರೆತು ಪರಸ್ಪರ ವಿಶ್ವಾಸಾರ್ಹತೆಯಿಂದ ವರ್ತಿಸಿ ಎಲ್ಲಾ ಜನಪ್ರತಿನಿಧಿಗಳು ನಾಡಿನ ಹಾಗೂ ದೇಶದ ಅಭ್ಯುದಯಕ್ಕೆ ಕಟಿಬದ್ಧರಾಗುವ ಅವಶ್ಯಕತೆಯಿದೆ. ಸಂಸದೀಯ ಮೌಲ್ಯಗಳನ್ನು ಇನ್ನಷ್ಟು ಹೆಚ್ಚಿಸುವ ನಿಟ್ಟಿನಲ್ಲಿ ಚಿಂತನೆ ನಡೆಸಿ, ಅವುಗಳ ಕಾರ್ಯರೂಪಕ್ಕೆ ಪರಿಣಾಮಕಾರಿಯಾಗಿ ಶ್ರಮ ಕೈಗೊಳ್ಳುವುದು ನಮ್ಮೆಲ್ಲರ ಆದ್ಯತೆಯಾಗಬೇಕಿದೆ. ಜನರಿಂದ ಆಯ್ಕೆಯಾದ ಪ್ರತಿಯೊಬ್ಬ ಪ್ರತಿನಿಧಿಯು ನಿರ್ಧಿಷ್ಟ ನೀತಿ ಸಂಹಿತೆಯನ್ನು ಅಳವಡಿಸಿಕೊಳ್ಳುವ ಮೂಲಕ ನಮ್ಮ ಪೂರ್ವಿಕ ಸಂಸದೀಯ ಪಟುಗಳ ಹೆಜ್ಜೆಗುರುತುಗಳಲ್ಲಿರುವ ತತ್ವಾದರ್ಶ ಮೌಲ್ಯಗಳನ್ನು ಸಕಾಲಿಕ ವಿವೇಕದೊಂದಿಗೆ ಗ್ರಹಿಸಿ ಅವುಗಳನ್ನು ಕಾರ್ಯರೂಪಗೊಳಿಸುವ ಸಂಕಲ್ಪ ಮಾಡಬೇಕಾಗಿರುವುದು ಇಂದಿನ ತುರ್ತು ಅವಶ್ಯಕತೆಯಾಗಿದೆ ಎಂದು ಬಸವರಾಜ ಹೊರಟ್ಟಿ ತಿಳಿಸಿದರು.

ಮೂರು ದಿನಗಳ ಕಾಲ ನಡೆಯುವ ಸಮ್ಮೇಳನದಲ್ಲಿ ದೇಶದ ಎಲ್ಲಾ ರಾಜ್ಯಗಳ ವಿಧಾನ ಸಭೆಯ ಸಭಾಧ್ಯಕ್ಷರು ಉಪಸಭಾಧ್ಯಕ್ಷರುಗಳು ಹಾಗೂ ವಿಧಾನ ಪರಿಷತ್ತಿನ ಸಭಾಪತಿ ಹಾಗೂ ಉಪಸಭಾಪತಿಗಳು ಭಾಗವಹಿಸಿದ್ದಾರೆ. ಲೋಕಸಭಾಧ್ಯಕ್ಷ ಓಂ ಬಿರ್ಲಾ, ರಾಜಸ್ಥಾನದ ಮುಖ್ಯಮಂತ್ರಿ ಅಶೋಕ ಗೆಹ್ಲೋಟ್, ರಾಜ್ಯಸಭೆಯ ಉಪಸಭಾಪತಿ ಹರಿವಂಶ, ರಾಜಸ್ಥಾನದ ವಿಧಾನಸಭಾಧ್ಯಕ್ಷ ಸಿ.ಪಿ ಜೋಷಿ, ಕರ್ನಾಟಕದ ಪ್ರತಿನಿಧಿಗಳಾದ ವಿಧಾನಸಭಾಧ್ಯಕ್ಷರಾದ ಯು.ಟಿ.ಖಾದರ, ವಿಧಾನಪರಿಷತ್ತಿನ ಉಪ ಸಭಾಪತಿಗಳಾದ ಎಂ.ಕೆ.ಪ್ರಾಣೇಶ, ಅಧಿಕಾರಿ ವೃಂದದ ಪರವಾಗಿ ಭಾಗವಹಿಸಿದ ಪರಿಷತ್ತಿನ ಕಾರ್ಯದರ್ಶಿ ಕೆ.ಆರ್.ಮಹಾಲಕ್ಷ್ಮೀ ಸಭಾಪತಿಗಳ ಆಪ್ತ ಕಾರ್ಯದರ್ಶಿ ಶೈಲಾ ಕೆ.ಡಿ. ಸೇರಿದಂತೆ ರಾಜಸ್ಥಾನದ ಶಾಸಕರು, ಸಂಸದರು ಸಮಾರಂಭದಲ್ಲಿ ಭಾಗವಹಿಸಿದ್ದರು.